ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
ಅಂತರ್ಜಾಲ : www.kptcl.com

ಇ-ಮೇಲ್ ವಿಳಾಸ :director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.

ದಿನಾಂಕ: 31 OCT 2018

ಕವಿಪ್ರನಿನಿ/ಬಿ9/85310/18-19

## ಸುತ್ತೋಲೆ

**ವಿಷಯ:-** ನಿಗಮದ ಕಚೇರಿಗಳಲ್ಲಿ ಮತ್ತು ಅಧಿಕೃತ ಸಭೆ-ಸಮಾರಂಭಗಳಲ್ಲಿ ಏಕಕಾಲಿಕ ಬಳಕೆ (Single use) ಪ್ಲಾಸ್ಟಿಕ್ ನೀರಿನ ಬಾಟಲ್‌ಗಳ ಬಳಕೆ/ಸರಬರಾಜನ್ನು ನಿಷೇಧಿಸುವ ಬಗ್ಗೆ.

**ಉಲ್ಲೇಖ:-** ಸರ್ಕಾರ ಆದೇಶ ಸಂಖ್ಯೆ ಸಿಆಸುಇ/83/ರಾಸವಿ/2018-19 ದಿನಾಂಕ 05/09/2018.

<><><><><><>

ಪ್ಲಾಸ್ಟಿಕ್ ಕ್ಯಾರಿ ಬಾಗ್‌ಗಳು ಹಾಗೂ ದೈನಂದಿನ ಬಳಕೆಯಲ್ಲಿರುವ ಇತರೆ ಪ್ಲಾಸ್ಟಿಕ್ ವಸ್ತುಗಳು ಅಲ್ಪಾವಧಿ ಹಾಗೂ ಧೀರ್ಘಾವದಿಯಲ್ಲಿ ಪರಿಸರಕ್ಕೆ ಹಾನಿಯನ್ನು ಮತ್ತು ಆರೋಗ್ಯಕ್ಕೆ ಅಪಾಯವನ್ನು ಉಂಟುಮಾಡುವ ಕಾರಣ, ಸದರಿ ವಸ್ತುಗಳ ತಯಾರಿಕೆ, ಮಾರಾಟ, ದಾಸ್ತಾನು ಮತ್ತು ಉಪಯೋಗವನ್ನು ಈಗಾಗಲೇ ಸರ್ಕಾರ ನಿಷೇಧಿಸಿದೆ. ಆದರೆ, ಏಕಕಾಲಿಕೆ ಬಳಕೆ ಪ್ಲಾಸ್ಟಿಕ್ ನೀರಿನ ಬಾಟಲ್‌ಗಳಿಗೆ ನಿಬಂಧನೆ ಇಲ್ಲದಿದ್ದರಿಂದ, ಏಕಕಾಲಿಕ ಬಳಕೆಯ ಪ್ಲಾಸ್ಟಿಕ್ ನೀರಿನ ಬಾಟಲ್‌ಗಳ ಬಳಕೆ ಯಥೇಚ್ಚವಾಗಿದ್ದು, ಬಳಸಿದ ಬಾಟಲ್‌ಗಳು ಎಲ್ಲೆಂದರಲ್ಲಿ ಎಸೆಯಲ್ಪಡುವುದರಿಂದ, ಘನ ತ್ಯಾಜ್ಯದಲ್ಲಿ ಗಣನೀಯ ಪ್ರಮಾಣದಲ್ಲಿ ಸೇರಿ, ಹಲವಾರು ಪರಿಸರಕ್ಕೆ ಸಂಬಂಧಿಸಿದ ಸಮಸ್ಯೆಗಳನ್ನು ಉಂಟುಮಾಡುವುದರ ಜೊತೆಗೆ, ನಗರ ಪ್ರದೇಶಗಳಲ್ಲಿ ಅಹಿತಕರ ದೃಶ್ಯ ಸೃಷ್ಟಿಯಾಗುತ್ತಿರುತ್ತದೆ. ಇಲ್ಲದೇ ಸರ್ಕಾರದ ಸಭೆ-ಸಮಾರಂಭಗಳಲ್ಲಿ ಪ್ಲಾಸ್ಟಿಕ್ ಬಾಟಲ್‌ಗಳಲ್ಲಿ ಸರಬರಾಜಾಗುವ ನೀರು ಹಲವಾರು ಸಂದರ್ಭಗಳಲ್ಲಿ ಅಲ್ಪ ಪ್ರಮಾಣದಲ್ಲಿ ಮಾತ್ರ ಬಳಕೆಯಾಗಿ, ಹೆಚ್ಚಿನ ಪ್ರಮಾಣದ ನೀರು ವ್ಯರ್ಥವಾಗುತ್ತಿದೆ ಮತ್ತು ಇಂತಹ ನೀರಿನ ಬಾಟಲ್‌ಗಳನ್ನು ಖರೀದಿಸುವುದರಿಂದ ಸರ್ಕಾರದ ಬೊಕ್ಕಸಕ್ಕೆ ದುಬಾರಿ ಖರ್ಚು ಸಹ ಆಗುತ್ತಿರುತ್ತದೆ.

ಈ ಹಿನ್ನಲೆಯಲ್ಲಿ, ಉಲ್ಲೇಖಿದ ಸರ್ಕಾರಿ ಆದೇಶದಲ್ಲಿ, ರಾಜ್ಯಾದಂತ ಸರ್ಕಾರಿ ಹಾಗೂ ಸರ್ಕಾರಿ ಸ್ವಾಮ್ಯದ ಮಂಡಳಿ, ನಿಗಮ, ವಿಶ್ವವಿದ್ಯಾನಿಲಯಗಳು ಹಾಗೂ ಸರ್ಕಾರದಿಂದ ಅನುದಾನ ಪಡೆಯುವಂತಹ ಯಾವುದೇ ಸಂಸ್ಥೆಗಳ ವತಿಯಿಂದ ಏರ್ಪಡಿಸಲ್ಪಡುವ ಸಭೆ-ಸಮಾರಂಭಗಳಲ್ಲಿ ಏಕಕಾಲಿಕ ಬಳಕೆಯ ಪ್ಲಾಸ್ಟಿಕ್ ಬಾಟಲ್ (Single use packaged water bottles) ನೀರಿನ ಬಳಕೆ/ಸರಬರಾಜು ಮಾಡುವುದನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿಷೇಧಿಸಲಾಗಿದೆ, ಹಾಗೂ ಇಂತಹ ಸಭೆ-ಸಮಾರಂಭಗಳಲ್ಲಿ ಕುಡಿಯುವ ನೀರನ್ನು ಸಂಭರ್ದಾನುಸಾರ ಶುಚಿತ್ವ ರೀತಿಯಲ್ಲಿ ಗ್ಲಾಸ್, ಸ್ಟೀಲ್, ಪೇಪರ್ ಮತ್ತಿತರ ಪ್ಲಾಸ್ಟಿಕ್ ಅಲ್ಲದ ಲೋಟಗಳಲ್ಲಿ ಸರಬರಾಜು ಮಾಡುವುದು ಹಾಗೂ ಕಚೇರಿಗಳಲ್ಲಿ ಸೂಕ್ತ ಸಾಮೂಹಿಕ ಕುಡಿಯುವ ನೀರು ವಿತರಣಾ ವ್ಯವಸ್ಥೆಯನ್ನು (Common drinking water dispensing system) ಅಳವಡಿಸಿಕೊಳ್ಳಲು ಸೂಚಿಸಲಾಗಿದೆ.

ಈ ಸಂಬಂಧ, ನಿಗಮದ ಎಲ್ಲಾ ಕಚೇರಿಗಳಲ್ಲಿ, ಸದರಿ ಆದೇಶದನ್ವಯ, ಈ ಕೆಳಕಂಡಂತೆ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ.

1. ನಿಗಮದವತಿಯಿಂದ ಏರ್ಪಡಿಸಲ್ಪಡುವ ಸಭೆ-ಸಮಾರಂಭ, ಕಾರ್ಯಾಗಾರ, ಸೆಮಿನಾರ್ ಇತ್ಯಾದಿಗಳಲ್ಲಿ, ಏಕಕಾಲಿಕ ಬಳಕೆಯ ಪ್ಲಾಸ್ಟಿಕ್ ಬಾಟಲ್ (Single use packaged water bottles) ನೀರಿನ ಬಳಕೆ/ಸರಬರಾಜು ಮಾಡುವುದನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿಷೇಧಿಸುವುದು.
2. ಸದರಿ ಸಭೆ-ಸಮಾರಂಭಗಳಲ್ಲಿ 20 ಲೀಟರ್ ಅಥವಾ ಅದಕ್ಕೂ ಹೆಚ್ಚಿನ ಸಾಮರ್ಥ್ಯದ ಶುದ್ಧೀಕರಿಸಿದ ಕುಡಿಯುವ ನೀರನ್ನು ಸಂದರ್ಭಾನುಸಾರ ಶುಚಿತ್ವ ರೀತಿಯಲ್ಲಿ ಗ್ಲಾಸ್, ಸ್ಟೀಲ್, ಪೇಪರ್ ಮತ್ತಿತರ ಪ್ಲಾಸ್ಟಿಕ್ ಅಲ್ಲದ ಲೋಟಗಳಲ್ಲಿ ನೀರಿನ ವಿತರಣಾ ವ್ಯವಸ್ಥೆ ಏರ್ಪಡಿಸತಕ್ಕದ್ದು.
3. ನಿಗಮದ ಕಚೇರಿಗಳಲ್ಲಿನ ಸಭಾಂಗಣಗಳಲ್ಲಿ ಅನುಮೋದಿತ ಆರ್.ಓ ನೀರು ಶುದ್ಧೀಕರಣ ಘಟಕಗಳನ್ನು ಅನುಸ್ಥಾಪಿಸಿ, ಗಾಜಿನ ಲೋಟ ಅಥವಾ ಸ್ಟೀಲ್ ಲೋಟ ಅಥವಾ ಪೇಪರ್ ಲೋಟ ಅಥವಾ ಪ್ಲಾಸ್ಟಿಕ್ ಅಲ್ಲದ ಲೋಟಗಳಲ್ಲಿ ನೀರು ಕುಡಿಯುವುದಕ್ಕೆ ವ್ಯವಸ್ಥೆ ಮಾಡುವುದು.
4. ನಿಗಮದ ಎಲ್ಲಾ ಕಚೇರಿಗಳಲ್ಲಿ ನೌಕರರು/ಸಾರ್ವಜನಿಕರಿಗಾಗಿ ಸೂಕ್ತ ಸಾಮೂಹಿಕ ಕುಡಿಯುವ ನೀರು ವಿತರಣಾ ವ್ಯವಸ್ಥೆಯನ್ನು (Common drinking water dispensing system) ಅಳವಡಿಸಿಕೊಳ್ಳುವುದು. ಈ ಸಂಬಂಧ ಕೇಂದ್ರ ಸರ್ಕಾರದ ಜಾಲತಾಣ https://gem.gov.in/ ರಲ್ಲಿ ಅನುಮೋದಿಸಲ್ಪಟಿರುವ ಅಥವಾ ರಾಜ್ಯ ಸರ್ಕಾರದಿಂದ ಅಂಗೀಕಸಲ್ಪಟ್ಟಿರುವ ಸಂಸ್ಥೆಗಳಿಂದ ಅಥವಾ ಯಾವುದದಾರೂ ಉತ್ತಮ ಆರ್.ಓ ಶುದ್ಧ ನೀರಿನ ಘಟಕಗಳನ್ನು ವ್ಯವಸ್ಥಾಪನೆಗೊಳಿಸುವುದು.

ನಿರ್ದೇಶಕರು (ಆ ಮತ್ತು ಮಾ.ಸಂ)
ಕವಿಪ್ರನಿನಿ, ಬೆಂಗಳೂರು.

ಪ್ರತಿಗಳು:-
1. ಎಲ್ಲಾ ಮುಖ್ಯ ಇಂಜಿನಿಯರ್‌ಗಳು (ವಿ), ಕವಿಪ್ರನಿನಿ.
2. ಎಲ್ಲಾ ಆರ್ಥಿಕ ಸಲಹೆಗಾರರುಗಳು, ಕವಿಪ್ರನಿನಿ.
3. ಎಲ್ಲಾ ಅಧೀಕ್ಷಕ ಇಂಜಿನಿಯರ್‌ಗಳು, (ವಿ)/(ಸಿವಿಲ್), ಕವಿಪ್ರನಿನಿ.
4. ಅಧೀಕ್ಷಕ ಇಂಜಿನಿಯರ್ (ವಿ), ಐಟಿ ಮತ್ತು ಎಂಐಎಸ್, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು- ಸದರಿ ಸುತ್ತೋಲೆಯನ್ನು ನಿಗಮದ ಅಂತರ್ಜಾಲದಲ್ಲಿ ಪ್ರಕಟಿಸಲು.
5. ಎಲ್ಲಾ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ.
6. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್‌ಗಳು (ವಿ)/(ಸಿವಿಲ್), ಕವಿಪ್ರನಿನಿ.
7. ಎಲ್ಲಾ ಉಪಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ.
8. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಹಣಕಾಸು)/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಆ ಮತ್ತು ಮಾ.ಸಂ)/ಕಂಪನಿ ಕಾರ್ಯದರ್ಶಿ ರವರಗಳ ಹಿರಿಯ ಆಪ್ತ ಸಹಾಯಕರು, ಕವಿಪ್ರನಿನಿ, ಕಾವೇರಿಭವನ, ಬೆಂಗಳೂರು.
9. ಎಲ್ಲಾ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್‌ಗಳು (ವಿ)/(ಸಿವಿಲ್), ಕವಿಪ್ರನಿನಿ.
10. ಎಲ್ಲಾ ಲೆಕ್ಕಾಧಿಕಾರಿಗಳು, ಕವಿಪ್ರನಿನಿ.

ಪ್ರತಿಗಳು ಮಾಹಿತಿಗಾಗಿ:-
1. ಪ್ರಧಾನ ಕಾರ್ಯದರ್ಶಿಗಳು, ಕವಿಪ್ರನಿನಿ ನೌಕರರ ಸಂಘ, ಬೆಂಗಳೂರು.
2. ಪ್ರಧಾನ ಕಾರ್ಯದರ್ಶಿಗಳು, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
3. ಪ್ರಧಾನ ಕಾರ್ಯದರ್ಶಿಗಳು, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿಗಳು, ಪ.ಜಾ/ಪ.ಪಂ., ನೌಕರರ ಕಲ್ಯಾಣ ಸಂಸ್ಥೆ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿಗಳು, ಕವಿಪ್ರನಿನಿ ಡಿಪ್ಲೋಮ ಇಂಜಿನಿಯರಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿಗಳು, ಕವಿಪ್ರನಿನಿ/ಎಸ್ಕಾಂ, ಎಸ್.ಸಿ/ಎಸ್.ಟಿ., ಅಧಿಕಾರಿಗಳ ಸಂಘ, ಬೆಂಗಳೂರು.